ಅ) ಸರ್ಕಾರಿ ಪ್ರೌಢಶಾಲೆಗಳಿಗೆ ಪ್ರಯೋಗಾಲಯದ ಉಪಕರಣಗಳ ಖರೀದಿಗಾಗಿ ಹಣವನ್ನು ಬಿಡುಗಡೆ ಮಾಡಲಾಗಿದೆಯೇ?

ಆ) ಹಾಗಿಲ್ಲದಿದ್ದಲ್ಲಿ, ಇದರಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಈ) ಹಾಗಿದ್ದಲ್ಲಿ ಈ ಬಗ್ಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು)

ಅ) 1987-88 ರಿಂದ 1991ರ ಜನವರಿಗೆ ಕೊನೆಯವರೆಗೆ ಮಂಜೂರು ಮಾಡಲಾಗಿರುವ ಸರ್ಕಾರಿ ಪ್ರೌಢಶಾಲೆಗಳು - 14

ಖಾಸಗಿ ಪ್ರೌಢಶಾಲೆಗಳು - 122

ಆ) ಪ್ರಯೋಗಾಲಯದ ಉಪಕರಣ ಖರೀದಿಗಾಗಿ ಪ್ರತ್ಯೇಕ ಹಣ ಬಿಡುಗಡೆ ಮಾಡಿಲ್ಲ

ಇ) ಬಂದಿದೆ.

ಈ) ಪರಿಶೀಲನೆಯಲ್ಲಿದೆ.

ವಯಸ್ಕರ ಶಿಕ್ಷಣದ ಬಗ್ಗೆ

1154 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಯಸ್ಕರ ಶಿಕ್ಷಣ, ಸರ್ಕಾರದ ಅಪೇಕ್ಷೆಯಂತೆ ಫಲಪ್ರದವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಯೋಜನೆಯನ್ನು ಇನ್ನೂ ಹೆಚ್ಚು ಫಲಪ್ರದಗೊಳಿಸಲು ಸರಕಾರದವರು ಬೇರೆ ಏನಾದರೂ ಹೆಚ್ಚಿನ ಸೌಲಭ್ಯವನ್ನು ಅಲ್ಲಿಯ ಶಿಕ್ಷಕ, ಶಿಕ್ಷಕಿಯರಿಗೆ ಕೊಡಲು ಯೋಚಿಸಿದ್ದಾರೆಯೆ?

ಇ) ಅನಕ್ಷರಸ್ಥರನ್ನು ಈ ಯೋಜನೆಯಡಿ ತರಲು, ಹೊಸ ಪ್ರಯತ್ನ ಏನಾದರೂ ನಡೆದಿದೆಯೆ?

ಈ) ವಯಸ್ಕರ ಶಿಕ್ಷಣದ ಇಲಾಖೆಯಲ್ಲಿ ನಡೆಯುತ್ತಿರುವ ಹೊಸ ಯೋಜನೆಗಳ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) ಇಲ್ಲ

ಆ) ಇಲ್ಲ

ಇ) ನಡೆದಿದೆ

ಈ) ಬಂದಿದೆ.

ಇಂಜಿನಿಯರಿಂಗ್ ಕಾಲೇಜುಗಳ ಬಗ್ಗೆ

1153 - ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಾರ್ಕರಿ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಈ ಕಾಲೇಜುಗಳಲ್ಲಿರುವ ವಿದ್ಯಾರ್ಥಿ ಪ್ರವೇಶಾವಕಾಶದ ಸಂಖ್ಯೆ ಎಷ್ಟು?